ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 26–08–2017

# ಪತ್ರಿಕಾ ಪ್ರಕಟಣೆ

## ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 26 (ಕರ್ನಾಟಕ ವಾರ್ತೆ)

ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಪದವೀಧರ ಪ್ರಾಥಮಿಕ ಶಿಕ್ಷಕ ವೃಂದದ (6 ರಿಂದ 8ನೇ ತರಗತಿ) ಒಟ್ಟು 124 ಹುದ್ದೆಗಳಿಗಾಗಿ ಅರ್ಜಿಗಳನ್ನು ಆಹ್ವಾನಿಸಿದೆ.

ಆಂಗ್ಲ ಭಾಷೆಯ – 57 ಹುದ್ದೆ, ಗಣಿತ ಮತ್ತು ವಿಜ್ಞಾನ (ಕನ್ನಡ ಮಾಧ್ಯಮ) – 38 ಹುದೆಗಳು, ಗಣಿತ ಮತ್ತು ವಿಜ್ಞಾನ (ಉರ್ದು ಮಾಧ್ಯಮ) – 16, ಸಮಾಜ ಪಾಠಗಳು (ಕನ್ನಡ ಮಾಧ್ಯಮ) – 7 ಹುದ್ದೆಗಳು, ಸಮಾಜ ಪಾಠಗಳು (ಉರ್ದು ಮಾಧ್ಯಮ) – 06 ಹುದ್ದೆಗಳು, ಹಾಗೂ ಹೈದ್ರಾಬಾದ್–ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಗಳಿಗಾಗಿ ರಾಜ್ಯಮಟ್ಟದ ಸ್ಥಳೀಯ ವೃಂದದ ಪದವೀಧರ ಪ್ರಾಥಮಿಕ ಶಿಕ್ಷಣ ವೃಂದದ ಒಟ್ಟು 22 ಹುದ್ದೆಗಳು, (ಆಂಗ್ಗ ಭಾಷೆ ಮಾಧ್ಯಮ) – 12 ಹುದ್ದೆಗಳು, ಗಣಿತ ಮತ್ತು ವಿಜ್ಞಾನ (ಕನ್ನಡ ಮಾಧ್ಯಮ) – 5 ಹುದ್ದೆಗಳು, ಗಣಿತ ಮತ್ತು ವಿಜ್ಞಾನ (ಉರ್ದು ಮಾಧ್ಯಮ) – 04 ಹುದ್ದೆಗಳು, ಸಮಾಜ ಪಾಠಗಳು (ಉರ್ದು ಮಾಧ್ಯಮ) – 01 ಹುದ್ದೆ ಸೇರಿದೆ.

ಈ ಎಲ್ಲಾ ಹುದ್ದೆಗಳಿಗಾಗಿ ಜಿಲ್ಲಾ ಮಟ್ಟದ ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ನೇರ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಇಲಾಖಾ ವೆಬ್‌ಸೈಟ್ **www.schooleducation.kar.nic.in** ನಲ್ಲಿ ಒದಗಿಸಲಾಗಿರುವ **pstr.caconline.in** ಲಿಂಕ್ ಮೂಲಕ ಅರ್ಜಿಗಳನ್ನು ಆನ್–ಲೈನ್‌ನಲ್ಲಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 25–09–2017.

ಹೆಚ್ಚಿನ ವಿವರಗಳಿಗೆ ಇಲಾಖಾ ವೆಬ್‌ಸೈಟ್‌ನಲ್ಲಿ ವೀಕ್ಷಿಸಬಹುದಾಗಿದೆ ಅಥವಾ ಕಚೇರಿಯ ದೂರವಾಣಿ ಸಂಖ್ಯೆ : 080–26701189 ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಜೆಡಿ:ಜಿಪಿಆರ್

ಸಂಖ್ಯೆ: 95/95

## ಅಂತಿಮ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ಆಗಸ್ಟ್ 26 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯಲ್ಲಿನ ಕಿರಿಯ ಲೆಕ್ಕ ಸಹಾಯಕರು – 234 (151+83 ಹೈ.ಕ) ಹುದ್ದೆಗಳ ಅಂತಿಮ ಆಯ್ಕೆಪಟ್ಟಿಯನ್ನು ಆಗಸ್ಟ್ 24 ರಂದು ಆಯೋಗದ ವೆಬ್‌ಸೈಟ್ http://kpsc.kar.nic.in/Selection List ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಜೆಡಿ:ಜಿಪಿಆರ್

ಸಂಖ್ಯೆ: 96/96

## ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ಆಗಸ್ಟ್ 26 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಕೈಮಗ್ಗ ಮತ್ತು ಜವಳಿ ಇಲಾಖೆಯಲ್ಲಿನ ಜವಳಿ ಪ್ರವರ್ಧನಾಧಿಕಾರಿ–01 (ಹೈ.ಕ) ಹುದ್ದೆಯ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಆಗಸ್ಟ್ 24 ರಂದು ಆಯೋಗದ ಅಂತರ್ಜಾಲದಲ್ಲಿ http://kpsc.kar.nic.in/Selection List ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಆಕ್ಷೇಪಣೆಗಳನ್ನು ಸಲ್ಲಿಸಲು ಬಯಸುವ ಅಭ್ಯರ್ಥಿಗಳು ಆಗಸ್ಟ್ 30 ರೊಳಗಾಗಿ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೊಗ, ಉದ್ಯೋಗ ಸೌಧ, ಬೆಂಗಳೂರು – 560 001 ಇವರಿಗೆ ಸಲ್ಲಿಸಬಹುದಾಗಿದೆ. ನಿಗದಿತ ದಿನಾಂಕದ ನಂತರ

ಸಲ್ಲಿಸುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲವೆಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಜೆಡಿ:ಜಿಪಿಆರ್

ಸಂಖ್ಯೆ: 97/97

## ನೂತನ ಸದಸ್ಯರ ಪ್ರಮಾಣ ವಚನ

ಬೆಂಗಳೂರು, ಆಗಸ್ಟ್ 26 (ಕರ್ನಾಟಕ ವಾರ್ತೆ)

ನೂತನವಾಗಿ ವಿಧಾನ ಪರಿಷತ್ತಿಗೆ ಅವಿರೋಧವಾಗಿ ಆಯ್ಕೆಯಾದ ಸಿ.ಎಂ. ಇಬ್ರಾಹಿಂ ಅವರು ಇಂದು ಪ್ರಮಾಣ ವಚನ ಸ್ವೀಕರಿಸಿದರು.

ಇಂದು ವಿಧಾನಸೌಧದ ಸಭಾಪತಿ ಕೊಠಡಿಯಲ್ಲಿ ನಡೆದ ಪ್ರಮಾಣ ವಚನ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಪತಿ ಡಿ.ಹೆಚ್. ಶಂಕರಮೂರ್ತಿ ಅವರು ಪ್ರತಿಜ್ಞಾವಿಧಿ ಬೋಧನೆ ಮಾಡಿದರು. ಭಗವಂತನ ಹೆಸರಿನಲ್ಲಿ ಸಿ.ಎಂ. ಇಬ್ರಾಹಿಂ ಅವರು ಪ್ರಮಾಣ ವಚನ ಸ್ವೀಕರಿಸಿದರು.

ಜೆಡಿ:ಜಿಪಿಆರ್

## ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ಆಗಸ್ಟ್ 26 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಪೌರಾಡಳಿತ ನಿರ್ದೇಶನಾಲಯದಲ್ಲಿನ ಮಹಾನಗರ ಪಾಲಿಕೆಯಲ್ಲಿ ಕಿರಿಯ ಅಭಿಯಂತರರು (ಸಿವಿಲ್) 108+17 (ಹೈ.ಕ) ಹುದ್ದೆಗಳಿಗೆ ಆಯೋಗದ ಅಂತರ್ಜಾಲದಲ್ಲಿ http://kpsc.kar.nic.in/Selection ಆಗಸ್ಟ್ 24 ರಂದು ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಆಕ್ಷೇಪಣೆಗಳನ್ನು ಸಲ್ಲಿಸಲು ಬಯಸುವ ಅಭ್ಯರ್ಥಿಗಳು ಪ್ರಕಟಗೊಂಡ ಏಳು ದಿನಗಳೊಳಗೆ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೊಗ, ಉದ್ಯೋಗ ಸೌಧ, ಬೆಂಗಳೂರು – 560 001 ಇವರಿಗೆ ಸಲ್ಲಿಸಬಹುದಾಗಿದೆ.

ಜೆಡಿ:ಜಿಪಿಆರ್